# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ಮಂಜುನಾಥ, ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ - ಆದೇಶ.

ಓದಲಾಗಿದೆ:- ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 27 ಇಎನ್‌ಕ್ಯೂ 2016 ದಿನಾಂಕ 04.06.2016 ಮತ್ತು 19.12.2016

ಪ್ರಸ್ತಾವನೆ:

ಕಲಬುರಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಕಚೇರಿಯಲ್ಲಿ ಒಂದು ಬಾರಿ ಪಾವತಿಯಾದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾಮಗಾರಿಯ ಬಿಲ್ಲುಗಳನ್ನು ಸುಳ್ಳು ದಾಖಲೆಗಳನ್ನು ಸೃಷ್ಟಿಸುವ ಮೂಲಕ 2ನೇ ಬಾರಿಗೆ ಪಾವತಿಸಿ ತೀವ್ರತರವಾದ ದುರ್ನಡತೆ / ಕರ್ತವ್ಯ ಲೋಪ ಎಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಶ್ರೀ ಬಿ.ಮಂಜುನಾಥ್, ಅಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕಲಬುರಗಿ ಇವರನ್ನು ಮೇಲೆ ಓದಲಾದ ದಿನಾಂಕ 04.06.2016ರ ಸರ್ಕಾರದ ಆದೇಶದಲ್ಲಿ ಅವರ ವಿರುದ್ಧದ ಶಿಸ್ತು ಕ್ರಮವನ್ನು ಬಾಕಿ ಇರಿಸಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು. ತದನಂತರ ದಿನಾಂಕ 19.12.2016ರ ಆದೇಶದಲ್ಲಿ ಸದರಿಯವರ ಅಮಾನತ್ತನ್ನು ಮುಂದುವರಿಸಲಾಗಿತ್ತು.

ಸರ್ಕಾರವು ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಬಿ.ಮಂಜುನಾಥ, ಕಾರ್ಯಪಾಲಕ ಇಂಜಿನೀಯರ್ ರವರ ಅಮಾನತ್ತನ್ನು ತೆರವುಗೊಳಿಸಿ ಅವರ ಸೇವೆಯನ್ನು ಮಾತೃ ಇಲಾಖೆಯಾದ ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಲು ನಿರ್ಧರಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

ಆದೇಶ ಸಂಖ್ಯೆ: ಗ್ರಾಅಪ 27 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ.16.05.2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಬಿ.ಮಂಜುನಾಥ, ಕಾರ್ಯಪಾಲಕ ಇಂಜಿನೀಯರ್ ಇವರ ವಿರುದ್ಧದ ಶಿಸ್ತು ಕ್ರಮವನ್ನು ಬಾಕಿ ಇರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ ಸದರಿಯವರ ಸೇವೆಯನ್ನು ಅವರ ಮಾತೃ ಇಲಾಖೆಯಾದ ಲೋಕೋಪಯೋಗಿ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/05/2017

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ಸಂಬಂಧಪಟ್ಟ ಅಧಿಕಾರಿಗೆ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).

ಮು.ತಿ.ನೋ.

9. ಮಾನ್ಯ ಗ್ರಾ..ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
11. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
12. ಹೆಚ್ಚುವರಿ ಪ್ರತಿ / ರಕ್ಷಾ ಕಡತ.